ಕೃಷಿ ಇಲಾಖೆಯಿಂದ ಮಂಜೂರಾದ ಯೋಜನೆಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

8 (86) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳಲ್ಲಿ ಕೃಷಿ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನಾಂಗದವರಿಗೆ ಮಂಜೂರಾದ ಯೋಜನೆಗಳಾವುವು ;

(ಆ) ಮಂಡ್ಯ ಜಿಲ್ಲೆಯಲ್ಲಿ ಈ ಯೋಜನೆಗಳಿಗೆ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಗಳಿಗೆ ನಿಗದಿಪಡಿಸಿರುವ ಗುರಿ ಎಷ್ಟು ; ಸಾಧನೆ ಎಷ್ಟು ;

(ಈ) ಈ ಯೋಜನೆಗಳಿಗೆ ನಿಗದಿಪಡಿಸಿದ ಅನುದಾನವೆಷ್ಟು? (ಜಿಲ್ಲಾವಾರು, ತಾಲ್ಲೂಕುವಾರು, ಫಲಾನುಭವಿಗಳ ಸಂಖ್ಯೆವಾರು ಮಾಹಿತಿ ನೀಡುವುದು)